ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	**35 (48)**
ಸದಸ್ಯರ ಹೆಸರು	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	07.12.2020
ಉತ್ತರಿಸುವ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಸರ್ಕಾರಿ / ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸಲು ಇರುವ ಮಾನದಂಡಗಳೇನು; (ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)	➢ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 280ಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿದ್ದಲ್ಲಿ 7ನೇ ಹುದ್ದೆಯಾಗಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಸೃಜನೆಗೆ ಅವಕಾಶವಿದೆ. ➢ ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಆದೇಶ ಸಂಖ್ಯೆ: ಇಡಿ 69 ಎಲ್‌ಬಿಪಿ 2011, ದಿನಾಂಕ:01/04/2011ರನ್ವಯ ಸಿಬ್ಬಂದಿ ಸ್ಥರ ವಿನ್ಯಾಸಕ್ಕನುಗುಣವಾಗಿ ಶಿಕ್ಷಕರನ್ನು ಒದಗಿಸಲಾಗುತ್ತಿದೆ.
ಆ.	ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು (ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)	ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 952 ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿ 747 ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳಿವೆ.
ಇ.	ಸದರಿ ಖಾಲಿ ಇರುವ ಹುದ್ದೆಗಳನ್ನು ದೀರ್ಘ ಕಾಲದಿಂದ ಭರ್ತಿ ಮಾಡದಿರಲು ಕಾರಣಗಳೇನು;	ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ 957 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಹಾಗೂ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್-I ಒಟ್ಟು 441 ಹುದ್ದೆಗಳು ಖಾಲಿ ಇದ್ದು, ಈ ಪೈಕಿ ನೇರ ನೇಮಕಾತಿಗೆ ಕಾಯ್ದಿರಿಸಿದ 331 ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳಂತೆ ಭರ್ತಿ ಮಾಡಲು ಆಯುಕ್ತಾಲಯದಿಂದ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು. ಈ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.
ಈ	ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವದು?	

ಸಂಖ್ಯೆ: ಇಪಿ 88 ಎಲ್‌ಬಿಪಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ
ಸಚಿವರು